# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಸೌರಶಕ್ತಿ ಆಧಾರಿತ ಜಾಲಮುಕ್ತ ನೀರಾವರಿ ಪಂಪ್‌ಸೆಟ್ ಯೋಜನೆ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಇಎನ್ 54 ವಿಎಸ್‌ಸಿ 2014 ದಿ:28.02.2015.
2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 54 ವಿಎಸ್‌ಸಿ 2014 ದಿ:12.08.2015.
3. ಸರ್ಕಾರದ ಪತ್ರ ಸಂಖ್ಯೆ: ಇಎನ್ 54 ವಿಎಸ್‌ಸಿ 2014 ದಿ:17.06.2015.
4. ಸರ್ಕಾರದ ಪತ್ರ ಸಂಖ್ಯೆ: ಇಎನ್ 48 ವಿಎಸ್‌ಸಿ 2016 ದಿ:01.09.2016.
5. ಸರ್ಕಾರದ ಆದೇಶ ಸಂಖ್ಯೆ: ಇಎನ್ 48 ವಿಎಸ್‌ಸಿ 2016 ದಿ:05.01.2017.
6. ಸರ್ಕಾರದ ಆದೇಶ ಸಂಖ್ಯೆ: ಇಎನ್ 17 ವಿಎಸ್‌ಸಿ 2017 ದಿ:29.11.2017.
7. ಸರ್ಕಾರದ ಆದೇಶ ಸಂಖ್ಯೆ: ಇಎನ್ 64 ವಿಎಸ್‌ಸಿ 2018 ದಿ:06.03.2018.
8. ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್‌ರವರ ಪತ್ರ ಸಂಖ್ಯೆ:ಕೆಆರ್‌ಇಡಿಎಲ್/07/ಸೋಲಾರ್-2/30-Vol-II2018/4117 ದಿ:08.06.2018.

********

ಪ್ರಸ್ತಾವನೆ:

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ (ಕ್ರೆಡಲ್) ಮುಖಾಂತರ ಮೇಲೆ ಓದಲಾದ (1) ರಿಂದ (7)ರಂತೆ 5 ಹೆಚ್.ಪಿ ಸಾಮರ್ಥ್ಯದ ಸೌರಶಕ್ತಿ ಆಧಾರಿತ ಜಾಲಮುಕ್ತ ನೀರಾವರಿ ಪಂಪ್‌ಸೆಟ್‌ಗಳನ್ನು ಒದಗಿಸುವ ಯೋಜನೆಯಡಿ ಮೊದಲನೇ ಹಂತದಲ್ಲಿ 1009 ಸಂಖ್ಯೆಯ ಸೌರಶಕ್ತಿ ಆಧಾರಿತ ಜಾಲಮುಕ್ತ ನೀರಾವರಿ ಪಂಪ್‌ಸೆಟ್‌ಗಳ ಅನುಷ್ಠಾನ ಕಾರ್ಯಕ್ರಮವನ್ನು ರಾಜ್ಯದ ಆಯ್ದ 11 ತಾಲ್ಲೂಕುಗಳಲ್ಲಿ, ಎರಡನೇ ಹಂತದಲ್ಲಿ 1530 ಸಂಖ್ಯೆಯ ಜಾಲಮುಕ್ತ ನೀರಾವರಿ ಪಂಪ್‌ಸೆಟ್‌ಗಳನ್ನು 48 ತಾಲ್ಲೂಕುಗಳಲ್ಲಿ ಮತ್ತು ಮೂರನೇ ಹಂತದಲ್ಲಿ 901 ಸಂಖ್ಯೆಯ ಜಾಲಮುಕ್ತ ನೀರಾವರಿ ಪಂಪ್‌ಸೆಟ್‌ಗಳನ್ನು 32 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

ಮೇ-2018ರ ಅಂತ್ಯಕ್ಕೆ ಮೊದಲನೇ ಹಂತದಲ್ಲಿ 984 ಸಂಖ್ಯೆ, ಎರಡನೇ ಹಂತದಲ್ಲಿ 371 ಸಂಖ್ಯೆ ಮತ್ತು ಮೂರನೇ ಹಂತದಲ್ಲಿ 07 ಸಂಖ್ಯೆಯ ಜಾಲಮುಕ್ತ ನೀರಾವರಿ ಪಂಪ್‌ಸೆಟ್‌ಗಳನ್ನು ಮಾತ್ರ ಅಳವಡಿಸಿ ಕಾರ್ಯಾರಂಭ ಮಾಡಲಾಗಿದೆ. ಸದರಿ ಯೋಜನೆಯು ವರ್ಷ 2014-15ರಲ್ಲಿ ಪ್ರಾರಂಭಗೊಂಡಿದ್ದರೂ ಕೂಡ ಇದುವರೆವಿಗೂ ಫಲಾನುಭವಿಗಳ ಗುರುತಿಸುವಿಕೆಯಲ್ಲಿ ಆಗುತ್ತಿರುವ ವಿಳಂಬದಿಂದಾಗಿ ಯೋಜನೆಯನ್ನು ನಿಗಧಿತ ಸಮಯದೊಳಗೆ ಕಾರ್ಯಗತಗೊಳಿಸಲು ಸಾಧ್ಯವಾಗದೇ, ಸದರಿ ಯೋಜನೆಗೆ ಹಂಚಿಕೆಯಾಗಿರುವ ಕೇಂದ್ರ/ರಾಜ್ಯ ಸರ್ಕಾರದ ಅನುದಾನವನ್ನು ಪೂರ್ಣಮಟ್ಟದಲ್ಲಿ ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲ.

ಯೋಜನೆಯ ಅನುಷ್ಠಾನಕ್ಕಾಗಿ ಅರ್ಹ ಫಲಾನುಭವಿಗಳನ್ನು ಗುರುತಿಸಿ ಪಟ್ಟಿಯನ್ನು ಕ್ರೆಡಲ್ ಸಂಸ್ಥೆಗೆ ಸಲ್ಲಿಸುವುದು ವಿದ್ಯುತ್ ಸರಬರಾಜು ಕಂಪನಿಗಳ ಜವಾಬ್ದಾರಿಯಾಗಿದ್ದು, ಈ ಸಂಬಂಧ ಸರ್ಕಾರ/ಕ್ರೆಡಲ್ ಸಂಸ್ಥೆಯಿಂದ ಹಲವಾರು ಪತ್ರ/ನೆನಪೋಲೆಗಳನ್ನು ಕಳುಹಿಸಿದ್ದರೂ ಕೂಡ ಫಲಾನುಭವಿಗಳನ್ನು ಗುರುತಿಸುವಲ್ಲಿ ನಿರೀಕ್ಷಿತ ಪ್ರಗತಿ ಕಂಡುಬಂದಿರುವುದಿಲ್ಲ.

ಮುಂದುವರೆದು, ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್‌ರವರು ಮೇಲೆ ಓದಲಾದ (8) ರಲ್ಲಿ ಸೌರಶಕ್ತಿ ಆಧಾರಿತ ಜಾಲಮುಕ್ತ ನೀರಾವರಿ ಪಂಪ್‌ಸೆಟ್‌ಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದ ಎಂ.ಎನ್.ಆರ್.ಇ.ರವರಿಂದ ಅನುಮೋದನೆಯಾಗಿರುವ ಸಹಾಯಧನವನ್ನು ದಿನಾಂಕ:30.09.2018ರೊಳಗೆ ಉಪಯೋಗಮಾಡಿಕೊಳ್ಳಬೇಕಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಸದರಿ ಯೋಜನೆಯ ಅನುಷ್ಠಾನಕ್ಕೆ ತಾಲ್ಲೂಕುವಾರು ಹಂಚಿಕೆಯನ್ನು ಸರ್ಕಾರದಿಂದ ನೀಡಿರುವುದರಿಂದ, ಹಂಚಿಕೆ ನೀಡಿರುವ ಕೆಲವು ತಾಲ್ಲೂಕುಗಳಲ್ಲಿ ನೀರಿನ ಮಟ್ಟ ತೃಪ್ತಿಕರವಾಗಿರದೇ ಇರುವುದರಿಂದ ಹಾಗೂ ಕೆಲವು ತಾಲ್ಲೂಕುಗಳಲ್ಲಿ ಹಂಚಿಕೆ ನೀಡಿರುವ ಸಂಖ್ಯೆಗನುಗುಣವಾಗಿ ಫಲಾನುಭವಿಗಳು ದೊರೆಯದೇ ಇರುವುದರಿಂದ ಹಾಗೂ ಇನ್ನಿತರೇ ತಾಂತ್ರಿಕ ಕಾರಣಗಳಿಂದಾಗಿ ಫಲಾನುಭವಿಗಳನ್ನು ಗುರುತಿಸುವಿಕೆಯಲ್ಲಿ ಆಗುತ್ತಿರುವ ವಿಳಂಬವನ್ನು ಸರ್ಕಾರವು ಮನಗಂಡು, ತಾಲ್ಲೂಕುವಾರು ಹಂಚಿಕೆ ನೀಡುವ ಬದಲಾಗಿ ರಾಜ್ಯ ವ್ಯಾಪ್ತಿಯ ಯಾವ ಭಾಗದಲ್ಲಾದರೂ ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಕಾರ್ಯಸಾಧ್ಯತೆ ಇದ್ದು, ಯೋಜನೆಯ ಷರತ್ತುಗಳಿಗನುಗುಣವಾಗಿ ಅನುಷ್ಠಾನಕ್ಕಾಗಿ ಆಸಕ್ತಿ ತೋರುವ ರೈತರಿಗೆ ನೇರವಾಗಿ ಜಾಲಮುಕ್ತ ಸೌರ ನೀರಾವರಿ ಪಂಪ್‌ಸೆಟ್‌ಗಳನ್ನು ಒದಗಿಸಲು ನಿರ್ಧರಿಸಿ ಈ ಕೆಳಗಿನಂತೆ ಆದೇಶಿಸಿದೆ:

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 63 ವಿಎಸ್‌ಸಿ 2018,**
**ಬೆಂಗಳೂರು, ದಿನಾಂಕ:12.06.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವತಿಯಿಂದ ಸೌರಶಕ್ತಿ ಆಧಾರಿತ ಜಾಲಮುಕ್ತ ನೀರಾವರಿ ಪಂಪ್‌ಸೆಟ್‌ಗಳನ್ನು ಒದಗಿಸುವ ಯೋಜನೆಯಲ್ಲಿ ಈಗಾಗಲೇ ಗುರುತಿಸಲಾಗಿರುವ ಫಲಾನುಭವಿಗಳನ್ನು ಹೊರತುಪಡಿಸಿ ಬಾಕಿ ಇರುವ ಸೌರ ಪಂಪ್‌ಸೆಟ್‌ಗಳನ್ನು ಮೊದಲು ಬಂದವರಿಗೆ ಮೊದಲ ಆದ್ಯತೆ ಮೇರೆಗೆ ಕ್ರೆಡಲ್ ವತಿಯಿಂದ ನೇರವಾಗಿ ಹಂಚಿಕೆ ನೀಡಲು ಈ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಿದೆ.

1. ಯೋಜನೆಯ ಹಂಚಿಕೆಗಾಗಿ ಅನ್ವಯವಾಗುವ ಶುಲ್ಕ ಪಾವತಿ, ಹಂಚಿಕೆಗಾಗಿ ವರ್ಗಾವಾರು ಬಾಕಿ ಇರುವ ಜಾಲಮುಕ್ತ ನೀರಾವರಿ ಸೌರ ಪಂಪ್‌ಸೆಟ್‌ಗಳ ಸಂಖ್ಯೆ, ಯೋಜನೆ ಹಂಚಿಕೆಗಾಗಿ

ಸಲ್ಲಿಸಬೇಕಾದ ಪ್ರಮುಖ ವಿವರ/ದಾಖಲೆಗಳು ವೆಬ್‌ಸೈಟ್‌ನಲ್ಲಿಯೇ ದೊರೆಯಲು ಕ್ರಮ ಕೈಗೊಂಡು ಹಂಚಿಕೆಯನ್ನು ಕ್ರೆಡಲ್ ಸಂಸ್ಥೆಯಿಂದ ಆನ್‌ಲೈನ್ ಮುಖಾಂತರ ಮಾಡುವುದು.

2. ಫಲಾನುಭವಿಗಳ ಗುರುತಿಸುವಿಕೆಯಲ್ಲಿ ಪಾರದರ್ಶಕತೆಯನ್ನು ಕಾಯ್ದುಕೊಳ್ಳುವುದು.
3. ಯೋಜನೆಯ ಅನುಷ್ಠಾನವು ಈಗಾಗಲೇ ವಿಳಂಬವಾಗಿರುವುದರಿಂದ, ವಿದ್ಯುತ್ ಸರಬರಾಜು ಕಂಪನಿಗಳು ನಿರ್ವಹಿಸಬೇಕಾದ ಪಾತ್ರವನ್ನು ಸಂಬಂಧಿಸಿದ ಅಧಿಕಾರಿಗಳು ತ್ವರಿತವಾಗಿ ನಿರ್ವಹಿಸುವುದು.

ಸೌರಶಕ್ತಿ ಆಧಾರಿತ ಜಾಲಮುಕ್ತ ನೀರಾವರಿ ಪಂಪ್‌ಸೆಟ್ ಯೋಜನೆಯ ಮೇಲೆ ಓದಲಾದ (1) ರಿಂದ (7) ರ ಆದೇಶಗಳಲ್ಲಿನ ಅನುಷ್ಠಾನ ಕಾರ್ಯಚಟುವಟಿಕೆಗಳು, ಕ್ರೆಡಲ್ ಪಾತ್ರ, ವಿದ್ಯುತ್ ವಿತರಣಾ ಕಂಪನಿಗಳ ಪಾತ್ರ ಹಾಗೂ ಘಟಕದ ನಿರ್ವಹಣೆ ಕುರಿತಂತೆ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

ಇವರಿಗೆ,
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಕರ್ನಾಟಕ ರಾಜ್ಯ ಪತ್ರ ಪ್ರಕಟಣೆಗಾಗಿ.

ಪ್ರತಿ:-

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣಾ ನಿಗಮ ನಿ., ಕಾವೇರಿ ಭವನ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ, ಸೆಸ್ಕ್, ಮೆಸ್ಕಾಂ, ಹೆಸ್ಕಾಂ, ಜೆಸ್ಕಾ.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, #39, ಶಾಂತಿ ಗೃಹ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು-01.
8. ನಿರ್ದೇಶಕರು (ಆರ್ಥಿಕ)/ಅಪರ ನಿರ್ದೇಶಕರು (ತಾಂತ್ರಿಕ)/ಜಂಟಿ ನಿರ್ದೇಶಕರು(ಎನ್‌ಸಿಇ)/ ಜಂಟಿ ನಿರ್ದೇಶಕರು(ಯೋಜನೆ), ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.

11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13. ಶಾಖಾ ರಕ್ಷಾ ಕಡತ/ಕಛೇರಿ ಪ್ರತಿ/ ಹೆಚ್ಚುವರಿ ಪ್ರತಿಗಳು.